# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ: 175/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - | ತಿಮ್ಮರಾಜು | ಸಿಡಬ್ಲ್ಯೂ-2 |
| ತಂದೆಯ/ಗಂಡನ ಹೆಸರು | - | ಕರಿಯಣ್ಣ | ಪಿಡಬ್ಲ್ಯೂ-3 |
| ವಯಸ್ಸು | - | ಸು. 45 ವರ್ಷ | ಪ್ರ.ವ.ಬೋ ದಿನಾಂಕ:28.02.2025 |
| ಉದ್ಯೋಗ | - | ಸಮಾಜ ಸೇವಕರು | |
| ವಾಸ | - | ಹಿರಿಯೂರು ನಗರ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ:-**

ಮೃತ ಗಾಯಿತ್ರಿ @ ಗಾಯಿತ್ರಮ್ಮ ಮತ್ತು ಚಾಸಾ-1 ಮತ್ತು 3 ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿತರನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ. ನಾನು ಪೊಲೀಸ್‌ರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲು: ಮಾನ್ಯ ಎಪಿಪಿಯವರಿಂದ:-**

ದಿನಾಂಕ:31.10.2022 ರಂದು ರಾತ್ರಿ 11.00 ಗಂಟೆಗೆ ಹಿರಿಯೂರು ನಗರದ ಹುಳಿಯಾರು ರಸ್ತೆಯಲ್ಲಿರುವ ವೇದಾ ಕಾಲೇಜು ಎದುರುಗಡೆ ನಾನು ಮತ್ತು ಚಾಸಾ-3 ರವರು ಮೋಟಾರ್ ಸೈಕಲ್‌ನಲ್ಲಿ ಬರುತ್ತಿರುವಾಗ ಅಲ್ಲಿ ಒಂದು ಆಟೋ ಸಂಖ್ಯೆ:ಕೆಎ-17-ಸಿ-6774 ನೇದ್ದನ್ನು ಅದರ ಚಾಲಕ ಅತಿವೇಗ, ಅಜಾಗರೂಕತೆ ಮತ್ತು ನಿರ್ಲಕ್ಷತನದಿಂದ ಚಲಾಯಿಸಿಕೊಂಡು ಬಂದು ಚಾಲನಾ ಹತೋಟಿ ತಪ್ಪಿ ಏಕಾಏಕಿ ಪಲ್ಟಿಯಾದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಅಪಘಾತದಲ್ಲಿ ಸದರಿ ರಿಕ್ಷಾ ಪ್ರಯಾಣಿಕರಾದ ಗಾಯಿತ್ರಿ @ ಗಾಯಿತ್ರಮ್ಮನವರಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಅವರನ್ನು ಆಸ್ಪತ್ರೆಗೆ ಸಾಗಿಸಿದ್ದು ಮಾರನೇ ದಿನ ಅವರು ತೀರಿಕೊಂಡಿರುತ್ತಾರೆ ಎಂದು ತಿಳಿಯಿತು ಎಂದರೆ ಸರಿಯಲ್ಲ. ಅಪಘಾತ ಆಟೋ ಚಾಲಕನ ತಪ್ಪಿನಿಂದಲೇ ಆಗಿರುತ್ತದೆ ಎಂದರೆ ಸರಿಯಲ್ಲ. ಆಟೋ ಚಾಲಕನ ಹೆಸರು ಶಂಕರ್ ಎಂದು ತಿಳಿಯಿತು ಎಂದರೆ ಸರಿಯಲ್ಲ. ಅವರು ಈ ದಿನ ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯಾಗಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸ್‌ರಿಗೆ ಈಗ ಮೇಲೆ ಓದಿ ಹೇಳಿದಂತೆ ದಿನಾಂಕಃ01.11.2022 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ–5** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.